**ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್.ಎಲ್.ಭೋಜೇಗೌಡ (ನೈರುತ್ಯ ಶಿಕ್ಷಕರ ಕ್ಷೇತ್ರ) ಇವರು ನಿಯಮ 72 ರಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ವಿಷಯ**

ಕರ್ನಾಟಕ ರಾಜ್ಯದಲ್ಲಿರುವ ಎಲ್ಲಾ 430 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಯಂ ಪ್ರಾಂಶುಪಾಲರೇ ಇಲ್ಲಾ, ಎಲ್ಲರೂ ಪ್ರಭಾರಿ ಪ್ರಾಂಶುಪಾಲರೇ ಇರುವುದರಿಂದ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಬೆಳವಣಿಗೆಗೆ ಪೂರಕವಾದ ನಿರ್ಣಯ ಕೈಗೊಳ್ಳಲು ಸಾಧ್ಯವಾಗುತ್ತಿಲ್ಲ. ಇದರಿಂದ ವಿದ್ಯಾರ್ಥಿಗಳಿಗೆ ಸೂಕ್ತ ಸಮಯಕ್ಕೆ ದೊರಕಬಹುದಾದ ಸೌಲಭ್ಯಗಳು ಸಿಗದೇ ವಂಚಿತರಾಗುತ್ತಿದ್ದು ಹಾಗೂ ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗಳ ಹಿತದೃಷ್ಟಿಯಿಂದ ಅರ್ಹ ಪ್ರಾಂಶುಪಾಲರನ್ನು ನೇಮಕಾತಿ ಮಾಡುವ ವಿಚಾರದ ಬಗ್ಗೆ ಮಾನ್ಯ ಶಿಕ್ಷಣ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಉತ್ತರ**

- ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಒಟ್ಟು 440 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಕಾರ್ಯ ನಿರ್ವಹಿಸುತ್ತಿವೆ. ಸದರಿ 440 ಕಾಲೇಜುಗಳ ಪೈಕಿ 412 ಪ್ರಾಂಶುಪಾಲರ ಹುದ್ದೆಗಳು ಮಂಜೂರಾಗಿದ್ದು, ಉಳಿದ 28 ಕಾಲೇಜುಗಳಿಗೆ ಹುದ್ದೆ ಮಂಜೂರಾಗಿರುವುದಿಲ್ಲ. ಮಂಜೂರಾದ 412 ಪ್ರಾಂಶುಪಾಲರ ಹುದ್ದೆಗಳು ಪ್ರಸ್ತುತ ಖಾಲಿ ಇರುತ್ತವೆ.

- ಪ್ರಾಂಶುಪಾಲರ ಹುದ್ದೆಗಳ ಭರ್ತಿಗೆ ಸಂಬಂಧಿಸಿದಂತೆ, ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/91/ಡಿಸಿಇ/2004, ದಿನಾಂಕ:25.09.2009 ರಲ್ಲಿ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಜಾರಿಗೊಳಿಸಲಾಗಿದ್ದು, ಸದರಿ ನಿಯಮಗಳಲ್ಲಿ ಪ್ರಾಂಶುಪಾಲರ ಹುದ್ದೆಗಳನ್ನು ಯು.ಜಿ.ಸಿ. ನಿಯಮಗಳನ್ವಯ ಶೇಕಡ 100 ರಷ್ಟು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆದೇಶಿಸಲಾಗಿರುತ್ತದೆ.

- ಕಾಲೇಜು ಶಿಕ್ಷಣ ಇಲಾಖೆಯಲ್ಲಿ 2006 ರ ಯು.ಜಿ.ಸಿ. ಪರಿಷ್ಕೃತ ವೇತನ ಶ್ರೇಣಿಗಳನ್ನು ಅಳವಡಿಸಿ ಅನುಷ್ಠಾನಗೊಳಿಸಲು ಹೊರಡಿಸಿರುವ ದಿನಾಂಕ:24.12.2009 ರ ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/37/ಯುಎನ್ಇ/2009 ರಲ್ಲಿಯೂ ಸಹ ಪ್ರಾಂಶುಪಾಲರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆದೇಶಿಸಲಾಗಿರುತ್ತದೆ.

- ಮಂಜೂರಾದ ಒಟ್ಟು 412 ಪ್ರಾಂಶುಪಾಲರ ಹುದ್ದೆಗಳಲ್ಲಿ 310 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದ ಆದೇಶ ಸಂಖ್ಯೆ:ಇಡಿ/121/ಡಿಸಿಇ/2018, ದಿನಾಂಕ:11.06.2019 ರಲ್ಲಿ ಅನುಮತಿ ನೀಡಲಾಗಿರುತ್ತದೆ.

- ಹೀಗೆ ಅನುಮತಿ ನೀಡಿರುವ 310 ಪ್ರಾಂಶುಪಾಲರು ಯು.ಜಿ. (ಗ್ರೇಡ್-I) ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/121/ಡಿಸಿಇ/2018, ದಿನಾಂಕ:09.09.2020 ರಲ್ಲಿ ಕರ್ನಾಟಕ ಶಿಕ್ಷಣ ಇಲಾಖಾ ಸೇವೆಗಳ (ಕಾಲೇಜು ಶಿಕ್ಷಣ ಇಲಾಖೆ) (ಪ್ರಾಂಶುಪಾಲರ ಹುದ್ದೆಗಳ ನೇಮಕಾತಿ) (ಸ್ನಾತಕ ಶಿಕ್ಷಣ) (ವಿಶೇಷ) ನಿಯಮಗಳು 2020 ಮತ್ತು ತಿದ್ದುಪಡಿ ನಿಯಮಗಳು 2022 ನ್ನು ದಿನಾಂಕ:21.03.2022 ರಲ್ಲಿ ಪ್ರಕಟಿಸಲಾಗಿರುತ್ತದೆ.

- ಅದರಂತೆ, ವಿಶೇಷ ನಿಯಮಗಳನ್ವಯ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಿ, 310 ಪ್ರಾಂಶುಪಾಲರ ಹುದ್ದೆಗಳಿಗೆ ನಿಯಮಾನುಸಾರ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ, ಅರ್ಹತಾ ಪಟ್ಟಿಯನ್ನು ಸಲ್ಲಿಸಲು ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/121/ಡಿಸಿಇ/2018, ದಿ:21.03.2022 ರಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸಲಾಗಿತ್ತು.

- ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಈಗಾಗಲೇ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಿದ್ದು, ಆಯ್ಕೆಗೊಂಡ ಅಭ್ಯರ್ಥಿಗಳ ಅಂತಿಮ ಮೆರಿಟ್ ಪಟ್ಟಿಯನ್ನು ಸಲ್ಲಿಸಿರುತ್ತದೆ. ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಸ್ವೀಕೃತವಾಗಿರುವ 141 ಸ್ಥಳೀಯ ವೃಂದದ (ಕೆ.ಕೆ.) ಹಾಗೂ 813 ಉಳಿಕೆ ಮೂಲ ವೃಂದದ (ನಾನ್ ಹೆಚ್.ಕೆ) ಮೆರಿಟ್ ಪಟ್ಟಿಯನ್ನು ಕರ್ನಾಟಕ ಶಿಕ್ಷಣ ಇಲಾಖಾ ಸೇವೆಗಳ (ಕಾಲೇಜು ಶಿಕ್ಷಣ ಇಲಾಖೆ) (ಪ್ರಾಂಶುಪಾಲರ ಹುದ್ದೆಗಳ ನೇಮಕಾತಿ) (ಸ್ನಾತಕ ಶಿಕ್ಷಣ) (ವಿಶೇಷ) ನಿಯಮಗಳು 2020 ರ ನಿಯಮ 4 ರನ್ವಯ ಕಾಲೇಜು ಶಿಕ್ಷಣ ಆಯುಕ್ತರ ಅಧ್ಯಕ್ಷತೆಯಲ್ಲಿನ ಆಯ್ಕೆ ಪ್ರಾಧಿಕಾರವು ಮೆರಿಟ್ ಪಟ್ಟಿಯಲ್ಲಿನ ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳಲು ಶೈಕ್ಷಣಿಕ / ಮೀಸಲಾತಿ ದಾಖಲಾತಿಗಳನ್ನು ಪರಿಶೀಲಿಸಿ ಅರ್ಹ ಅಭ್ಯರ್ಥಿಗಳ ಅಂತಿಮ ಆಯ್ಕೆಪಟ್ಟಿಯನ್ನು ಸಲ್ಲಿಸುವಂತೆ ದಿನಾಂಕ:13.03.2024 ರ ಪತ್ರ ಸಂಖ್ಯೆ:ಇಡಿ 93 ಡಿಸಿಇ 2024(ಇ) ರಲ್ಲಿ ಸೂಚಿಸಲಾಗಿರುತ್ತದೆ. ಅದರಂತೆ ಇಲಾಖೆಯಲ್ಲಿ ಪ್ರಕ್ರಿಯೆ ಕೈಗೊಳ್ಳಲು ಕ್ರಮವಹಿಸಲಾಗುತ್ತಿದೆ.

- ಆದಾಗ್ಯೂ, ಕಾಲೇಜುಗಳ ಆಡಳಿತ ಹಾಗೂ ಶೈಕ್ಷಣಿಕ ಹಿತದೃಷ್ಟಿಯಿಂದ ಸೇವಾ ಹಿರಿತನದ ಆಧಾರದ ಮೇಲೆ ಆಯಾ ಕಾಲೇಜುಗಳಲ್ಲಿನ ಹಿರಿಯ ಅಧ್ಯಾಪಕರಿಗೆ ಪ್ರಾಂಶುಪಾಲರ ಪ್ರಭಾರವನ್ನು ನಿರ್ವಹಿಸಲು ಸೂಚಿಸಲಾಗಿರುತ್ತದೆ. ಆ ಮೂಲಕ ಕಾಲೇಜಿನ ವಿದ್ಯಾರ್ಥಿಗಳ ಬೆಳವಣಿಗೆಗೆ ಪೂರಕವಾದ ನಿರ್ಣಯಗಳನ್ನು ಕೈಗೊಳ್ಳಲು ಹಾಗೂ ವಿದ್ಯಾರ್ಥಿಗಳಿಗೆ ಸಿಗಬೇಕಾದ ಅಗತ್ಯ ಸೌಲಭ್ಯಗಳನ್ನು ದೊರಕಿಸಿಕೊಡುವಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಮುಂದುವರೆದು, ಮಂಜೂರಾದ 412 ಪ್ರಾಂಶುಪಾಲರ ಹುದ್ದೆಗಳಲ್ಲಿ 310 ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಈಗಾಗಲೇ ಕ್ರಮವಹಿಸಲಾಗಿದೆ. ಉಳಿದಂತೆ, ಮಂಜೂರಾಗಿರುವ 102 ಹುದ್ದೆಗಳನ್ನು ಹಾಗೂ ಇನ್ನೂ ಅಗತ್ಯವಿರುವ 28 ಪ್ರಾಂಶುಪಾಲರ ಹುದ್ದೆಗಳನ್ನು ಸೃಜನೆ ಮಾಡಿ, ಒಟ್ಟು 130 ಹುದ್ದೆಗಳನ್ನು ಯು.ಜಿ.ಸಿ. ನಿಯಮಗಳನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ ಪರಿಶೀಲಿಸಲಾಗುತ್ತಿದೆ.

ಇಡಿ 184 ಡಿಸಿಇ 2024 (ಇ)

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು